ಕರ್ನಾಟಕ ಸರ್ಕಾರ

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

ಸಂಖ್ಯೆ: ಸಂ:ಹಿಂವಕಇ/ತ-1/ಪ.ಪೂ.ತ/ಸಿಆರ್-7/2019-20 ದಿನಾಂಕ:31.08.2019.

## ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಸೂಚನೆಗಳು

## -:(Instructions to Candidates):-

1. 2019-20ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಐ.ಎ.ಎಸ್, ಕೆ.ಎ.ಎಸ್. ಮತ್ತು ಬ್ಯಾಂಕಿಂಗ್ ಪಿ.ಒ. ಪರೀಕ್ಷಾ ಪೂರ್ವ ತರಬೇತಿಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ. ಸಂ. | ಪ್ರವೇಶ ಪರೀಕ್ಷೆ | ಪರೀಕ್ಷಾ ದಿನಾಂಕ: | ಸಮಯ |
|---|---|---|---|
| 1 | ಕೆ.ಎ.ಎಸ್. ಮತ್ತು ಐ.ಎ.ಎಸ್. ಗೆ ಪರೀಕ್ಷಾ ಪೂರ್ವ ತರಬೇತಿಗೆ | 08.09.2019 ರ ಭಾನುವಾರ | ಪೂರ್ವಾಹ್ನ 10.30 ರಿಂದ ಅಪರಾಹ್ನ 12.30 ಗಂಟೆಯವರೆಗೆ |
| 2 | ಬ್ಯಾಂಕಿಂಗ್ ಪಿ.ಒ. ಪರೀಕ್ಷಾ ಪೂರ್ವ ತರಬೇತಿಗೆ | 08.09.2019 ರ ಭಾನುವಾರ | ಅಪರಾಹ್ನ2.30 ರಿಂದ 4.30 ಗಂಟೆಯವರೆಗೆ |

2. ಕೆ.ಎ.ಎಸ್. ಮತ್ತು ಐ.ಎ.ಎಸ್. ಪರೀಕ್ಷಾ ಪೂರ್ವ ತರಬೇತಿಯ ಆಯ್ಕೆಗೆ ಒಂದು ಪ್ರವೇಶ ಪರೀಕ್ಷೆಯನ್ನು ಹಾಗೂ ಬ್ಯಾಂಕಿಂಗ್ ಪಿ.ಒ. ಪರೀಕ್ಷಾ ಪೂರ್ವ ತರಬೇತಿಯ ಆಯ್ಕೆಗೆ ಒಂದು ಪ್ರವೇಶ ಪರೀಕ್ಷೆಯನ್ನು ಪ್ರತ್ಯೇಕವಾಗಿ ನಡೆಸಲಾಗುವುದು.
3. ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯುವ ಜಿಲ್ಲಾ ಕೇಂದ್ರಗಳು:

   ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು **ಬೆಂಗಳೂರು (ನಗರ), ಮೈಸೂರು, ಧಾರವಾಡ, ಕಲಬುರ್ಗಿ, ಬೆಳಗಾವಿ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬಳ್ಳಾರಿ ಜಿಲ್ಲಾ ಕೇಂದ್ರಗಳಲ್ಲಿ ಏಕ ಕಾಲಕ್ಕೆ ನಡೆಸಲಾಗುವುದು** (ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವಾಗ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಆಯ್ಕೆ ಮಾಡಿಕೊಂಡಿರುವ ಜಿಲ್ಲಾ ಕೇಂದ್ರಗಳಲ್ಲೇ ಪರೀಕ್ಷೆಗೆ ಹಾಜರಾಗುವುದು. ಪರೀಕ್ಷಾ ಜಿಲ್ಲಾ ಕೇಂದ್ರಗಳು/ಪರೀಕ್ಷಾ ಕೇಂದ್ರಗಳ ಬದಲಾವಣೆಗೆ ಅವಕಾಶವಿರುವುದಿಲ್ಲ).
4. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ಪರೀಕ್ಷಾ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರತಕ್ಕದ್ದು.

5. ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ದಾಖಲೆಗಳು:

- ಐ.ಎ.ಎಸ್. ಮತ್ತು ಕೆ.ಎ.ಎಸ್ ಹಾಗೂ ಬ್ಯಾಂಕಿಂಗ್ ಪ್ರೊಬೇಷನರಿ ಆಫೀಸರ್ಸ್ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳ ಆಯ್ಕೆಗೆ ನಡೆಸುವ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಪ್ರವೇಶ ಪತ್ರದ (exam ADMISSION TICKET) ಪ್ರತಿಯನ್ನು ಕಡ್ಡಾಯವಾಗಿ ಪರೀಕ್ಷಾ ಕೇಂದ್ರಕ್ಕೆ ತರಬೇಕು, ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ. ರಿಜಿಸ್ಟ್ರೇಷನ್ ನಂಬರ್ ಹಾಗೂ ಜನ್ಮ ದಿನಾಂಕವನ್ನು ನಮೂದಿಸಿ ಪರೀಕ್ಷಾ ಪ್ರವೇಶ ಪತ್ರದ (exam ADMISSION TICKET) ಪ್ರತಿಯನ್ನು ಪಡೆದುಕೊಳ್ಳಬಹುದು, ಅಭ್ಯರ್ಥಿಗಳ ಎಸ್.ಎಸ್.ಎಲ್.ಸಿ. ರಿಜಿಸ್ಟ್ರೇಷನ್ ನಂಬರ್ ಅನ್ನೇ Application Number ಎಂದು ಪರಿಗಣಿಸಲಾಗುವುದು).
- ಅಭ್ಯರ್ಥಿಗಳು ತಮ್ಮ ಭಾವಚಿತ್ರ ಮತ್ತು ವಿಳಾಸವಿರುವ ಈ ಕೆಳಕಂಡ ಯಾವುದಾದರೊಂದು ಮೂಲ (Original) ಗುರುತಿನ ಚೀಟಿಯನ್ನು ತಮ್ಮೊಂದಿಗೆ ತರಬೇಕು –

  ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಚಾಲನಾ ಪರವಾನಗಿ, ಪ್ಯಾನ್ ಕಾರ್ಡ್, ಪಾಸ್‌ಪೋರ್ಟ್, ಅಧಿಕೃತ ಬ್ಯಾಂಕ್‌ಗಳು/ಅಂಚೆ ಕಛೇರಿಯಿಂದ ನೀಡುವ ಭಾವಚಿತ್ರ ಮತ್ತು ವಿಳಾಸವಿರುವ ಪಾಸ್ ಬುಕ್.

**ವಿಶೇಷ ಸೂಚನೆ: ರಾಯಚೂರು ಜಿಲ್ಲಾ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡಿಕೊಂಡಿದ್ದ ಅಭ್ಯರ್ಥಿಗಳನ್ನು ಬಳ್ಳಾರಿ ಜಿಲ್ಲಾ ಕೇಂದ್ರಕ್ಕೆ ವರ್ಗಾಯಿಸಲಾಗಿದೆ, ಆದ್ದರಿಂದ ಸದರಿ ಅಭ್ಯರ್ಥಿಗಳು ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗುವುದು..**

**ಸಹಾಯ ವಾಣಿ: 8050770004**
(ಕಛೇರಿ ಕಾರ್ಯನಿರ್ವಹಿಸುವ ದಿನಗಳು ಮತ್ತು ಸಮಯದಲ್ಲಿ ಮಾತ್ರ ಬೆಳಗ್ಗೆ 10.00 ರಿಂದ ಅಪರಾಹ್ನ 1.30 ಹಾಗೂ ಅಪರಾಹ್ನ 2.30 ರಿಂದ 5.30)

ಸಹಿ/-

ಆಯುಕ್ತರು,

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,

ಬೆಂಗಳೂರು.